# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀಮತಿ ಬಸಮ್ಮ ದೊಡ್ಡಮನಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಾರಜೋಳ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/UPLOK/BGM/6282/2014/PP, ದಿನಾಂಕ:18.01.2017

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 13.01.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಅಮಜಸಾಬ ದವಳಾಸಾಬ ಗೋಟೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು 1) ಶ್ರೀಮತಿ ಅನುಸೂಯ ಸುರೇಶ್ ರಾಠೋಡ್, ಅಧ್ಯಕ್ಷರು, 2) ಶ್ರೀಮತಿ ಬಸಮ್ಮ ದೊಡ್ಡಮನಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು 3) ಶ್ರೀ ಸದಾಶಿವ ಗುರಪ್ಪ ದಳವಾಯಿ, ಸದಸ್ಯರು – ಕಾರಜೋಳ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ (ಇನ್ನು ಮುಂದೆ 'ಎದುರುದಾರರು 1, 2 ಮತ್ತು 3' ಎಂದು ಕರೆಯಲ್ಪಡುತ್ತಾರೆ) ಇವರುಗಳ ವಿರುದ್ಧ ದೂರು ನೀಡಿ, 2012–13 ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಕಾರಜೋಳ ಗ್ರಾಮ ಪಂಚಾಯತಿಯಲ್ಲಿ ನಿರ್ವಹಿಸಿದ ಕಾಮಗಾರಿಗಳಿಗೆ ಮರಣ ಹೊಂದಿದವರವನ್ನು ಕೂಲಿಕಾರರೆಂದು ತೋರಿಸಿ ಹಣ ದುರುಪಯೋಗ ಮಾಡಿರುತ್ತಾರೆಂದು ಹಾಗೂ ಶೌಚಾಲಯಗಳನ್ನು ನಿರ್ಮಿಸದೆ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಹಣ ದುರುಪಯೋಗ ಮಾಡಿರುತ್ತಾರೆಂದು ಆರೋಪಿಸಿ ಎದುರುದಾರರ ವಿರುದ್ಧ ಕ್ರಮ ಜರುಗಿಸಬೇಕೆಂದು ಲೋಕಾಯುಕ್ತ ಸಂಸ್ಥೆಗೆ ದೂರು ನೀಡಿರುತ್ತಾರೆ.

ಈ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದು, ಎದುರುದಾರರಿಂದ ಆಕ್ಷೇಪಣೆಗಳನ್ನು ಕೋರಲಾಗಿ, ಎದುರುದಾರರುಗಳು ಯಾವುದೇ ಆಕ್ಷೇಪಣೆಗಳನ್ನು ಸಲ್ಲಿಸದೇ ಇರುವ ಹಿನ್ನೆಲೆಯಲ್ಲಿ ಹಾಗೂ ದೂರಿನಂಶಗಳನ್ನು ಹಾಗೂ ಹಾಜರುಪಡಿಸಿರುವ ದಾಖಲೆಗಳನ್ನು ಪರಿಶೀಲಿಸಲಾಗಿ 2012–13 ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಸುಳ್ಳಿನ ದಾಖಲೆಗಳನ್ನು ಸೃಷ್ಟಿಸಿ ಹಣ ದುರುಪಯೋಗಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಸಾಬೀತಾಗಿರುವ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1)(ii) ಮತ್ತು (iii) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡು ಬರುವುದರಿಂದ, ಎದುರುದಾರ (2) ಆದ ಶ್ರೀಮತಿ ಬಸಮ್ಮ ದೊಡ್ಡಮನಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಾರಜೋಳ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಶಿಸ್ತು ನಡವಳಿಕೆ ಕ್ರಮ ಜರುಗಿಸಲು ಹಾಗೂ ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಹಾಗೂ ಎದುರುದಾರ (1) ಮತ್ತು (3) ಇವರು ಚುನಾಯಿತ ಪ್ರತಿನಿಧಿಗಳಾಗಿರುವುದರಿಂದ ಇವರುಗಳ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರನ್ವಯ ಕ್ರಮವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಎದುರುದಾರ (1) ಮತ್ತು (3) ಇವರು ಚುನಾಯಿತ ಪ್ರತಿನಿಧಿಗಳಾಗಿರುವುದರಿಂದ ಇವರುಗಳ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರನ್ವಯ ಇಲಾಖೆಯಿಂದ ಕ್ರಮವಹಿಸಲಾಗುತ್ತಿದೆ ಹಾಗೂ ಎದುರುದಾರ (1) ಆದ ಶ್ರೀಮತಿ ಬಸಮ್ಮ ದೊಡ್ಡಮನಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಾರಜೋಳ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 68 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 30.01.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಬಸಮ್ಮ ದೊಡ್ಡಮನಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಾರಜೋಳ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ-8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   (ಮೇಲೆ ಓದಲಾದ (1) ರಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ.
5) ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ತಾಲ್ಲೂಕು ಪಂಚಾಯತಿ, ವಿಜಯಪುರ.
   (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಕಳುಹಿಸುವಂತೆ ಕೋರಿದೆ.)
6) ಶ್ರೀಮತಿ ಬಸಮ್ಮ ದೊಡ್ಡಮನಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಾರಜೋಳ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು ಮತ್ತು ಜಿಲ್ಲೆ.
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.